ಕೆರೆಗಳಲ್ಲಿ ತುಂಬಿರುವ ಹೂಳೆತ್ತುವುದೂ ಸೇರಿದಂತೆ ಕೆರೆಗಳ ಸಮಗ್ರ ಅಭಿವೃದ್ಧಿಗಾಗಿ ಯೋಜನೆಯು ತಯಾರಿಕೆಯ ಹಂತದಲ್ಲಿದ್ದು, ಈ ಯೋಜನೆಗೆ ವಿಶ್ವಬ್ಯಾಂಕ್‌ನಿಂದ ನೆರವು ಪಡೆಯಲು ಪ್ರಯತ್ನ ನಡೆಸಲಾಗುತ್ತಿದೆ.

ರಾಜ್ಯದಲ್ಲಿ ಡಕಾಯಿತಿ ಪ್ರಕರಣಗಳ ಸಂಖ್ಯೆ

1840 (2287) ಶ್ರೀ ಮುದ್ದಹನುಮೇಗೌಡ ಎಸ್.ಪಿ. (ಕುಣಿಗಲ್):

ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ಕರ್ನಾಟಕ ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ದಾಖಲಾದ ಡಕಾಯಿತಿ ಪ್ರಕರಣಗಳ ಸಂಖ್ಯೆ ಎಷ್ಟು;

(ಆ) ತುಮಕೂರು ಜಿಲ್ಲೆಯಲ್ಲಿ ದಾಖಲಾತಿ ಡಕಾಯಿತಿ ಪ್ರಕರಣಗಳ ಸಂಖ್ಯೆ ಎಷ್ಟು;

(ಇ) ಈ ಡಕಾಯಿತಿ ನಿಗ್ರಹಕ್ಕೆ ಸರ್ಕಾರ ವಿಶೇಷ ಕಾರ್ಯಕ್ರಮ ಹಾಕಿಕೊಳ್ಳಲಾಗಿದೆಯೇ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು)

(ಅ) ವಿವರಗಳು ಈ ಕೆಳಕಂಡಂತಿವೆ.

ಕ್ರಮ ಸಂಖ್ಯೆ	ವರ್ಷ	ವರದಿಯಾದ ಪ್ರಕರಣಗಳು
1.	1997	288
2.	1998	269
3.	1999	282

(ಆ) ವಿವರಗಳು ಈ ಕೆಳಕಂಡಂತಿವೆ.

ಕ್ರಮ ಸಂಖ್ಯೆ	ವರ್ಷ	ವರದಿಯಾದ ಪ್ರಕರಣಗಳು
1.	1997	12
2.	1998	32
3.	1999	10

(ಇ) ತೆಗೆದುಕೊಂಡ ಕ್ರಮ

1. ಹಗಲು ಮತ್ತು ರಾತ್ರಿ ಪೊಲೀಸ್ ಗಸ್ತನ್ನು ಬಿಗಿಗೊಳಿಸಲಾಗಿದೆ.

2. ಮಾಜಿ ಖೈದಿಗಳು: ಎಂ.ಒ.ಬಿ. ಖೈದಿಗಳ ಮೇಲೆ ತೀವ್ರ ನಿಗಾ ವಹಿಸಲಾಗುತ್ತಿದೆ.

3. ಒ.ವಿ. ಹಾಗೂ ತಲೆ ಮರಿಸಿಕೊಂಡಿರುವ ಅಪರಾಧಿಗಳನ್ನು ಪತ್ತೆ ಹಚ್ಚುವಲ್ಲಿ ತೀವ್ರ ಪ್ರಯತ್ನ ನಡೆಸಲಾಗುತ್ತಿದೆ.

4. ನೆರೆಹೊರೆ ಕಾವಲು ಸಮಿತಿ ಯೋಜನೆಗಳನ್ನು ರಚಿಸಿ ಜಾರಿಗೊಳಿಸಲಾಗಿದೆ.

5. ಬಳ್ಳಾರಿ, ಗುಲ್ಬರ್ಗಾ ಮತ್ತು ಬೆಂಗಳೂರಿನಲ್ಲಿ ದರೋಡೆ ನಿಯಂತ್ರಕ ದಳಗಳು ಅಸ್ಥಿತ್ವದಲ್ಲಿರುತ್ತದೆ.

6. ಗಡಿ ಪ್ರದೇಶಗಳಲ್ಲಿ ಮಾಹಿತಿಯನ್ನು ಹಂಚಿಕೊಳ್ಳಲು ಕ್ರಮವಾಗಿ ಸಭೆಗಳನ್ನು ನಡೆಸಲಾಗುತ್ತಿದೆ.

ಪೊಲೀಸ್ ಇಲಾಖೆಯಲ್ಲಿ ಕಾನ್ಸ್‌ಟೇಬಲ್ ಹುದ್ದೆಗಳು

1841 (2288) ಶ್ರೀ ಮುದ್ದಹನುಮೇಗೌಡ ಎಸ್.ಪಿ. (ಕುಣಿಗಲ್):

ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಕಾನ್ಸ್‌ಟೇಬಲ್ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ಹಾಗಿದ್ದಲ್ಲಿ ಇವುಗಳನ್ನು ಯಾವಾಗ ತುಂಬಲಾಗುವುದು?

ಶೀ ಮಲ್ಲಿಕಾರ್ಜುನ ಎಂ. ಖರ್ಗೆ (ಗೃಹ ಸಚಿವರು)

(ಅ) 1646 ಹುದ್ದೆಗಳು

(ಆ) ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ವಿದ್ಯುತ್ ಪ್ರಸರಣ ನಿಗಮದ ಅವ್ಯವಸ್ಥೆ

1842 (2283) ಶ್ರೀ ಮುನಿನರಸಿಂಹಯ್ಯ (ದೇವನಹಳ್ಳಿ):

ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ಮಂಜೂರಾಗಿರುವ ವಿದ್ಯಾನಗರ ಹಾಗೂ ಬೂದಿಗೆರೆ 66 ಕೆ.ವಿ. ಪವರ್ ಸ್ಟೇಷನ್‌ಗಳಿಗೆ 2000-2001 ಆಯವ್ಯಯದಲ್ಲಿ ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ;

(ಆ) ದೇವನಹಳ್ಳಿ ವಿಧಾನಸಭಾ ಕ್ಷೇತ್ರದಲ್ಲಿ ವಿದ್ಯುತ್ ಸರಬರಾಜಿನಲ್ಲಿ ಲೋ-ವೋಲ್ಟೇಜ್ ಆಗುತ್ತಿರುವ ಮತ್ತು ಪದೇ ಪದೇ ಪವರ್‌ಕಟ್ ಮಾಡುವ ಪದ್ಧತಿಯನ್ನು ತಪ್ಪಿಸುವಿರಾ;

(ಇ) ಕ್ಷೇತ್ರದಲ್ಲಿ ವಿಫಲವಾದ ಟ್ರಾನ್ಸ್‌ಫಾರ್ಮರ್‌ಗಳ ಬದಲಾವಣೆಗೆ 10-15 ದಿನಗಳಾಗುತ್ತಿರುವುದು ತಮ್ಮ ಗಮನಕ್ಕೆ ಬಂದಿದೆಯೇ;